ಲಿಖಿತ ಮೂಲಕ ಉತ್ತರಿಸುವ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಗುರುವಾರ, ದಿನಾಂಕ : 19 ನೇ ಮಾರ್ಚ್, 2020

ಬಿ.ಬಿ.ಎಂ.ಪಿ ವ್ಯಾಪ್ತಿಯಲ್ಲಿ ಮರ ಕಡಿದು ಸಸಿ ನೆಟ್ಟ ಕುರಿತು

ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) :-

1249 (1525) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ವಿವಿಧ ಅಭಿವೃದ್ಧಿ ಯೋಜನೆಗಳಿಗೆ ಕಳೆದ ಮೂರು ವರ್ಷಗಳಿಂದ ಕಡಿಯಲಾದ ಮರಗಳ ಸಂಖ್ಯೆ ಎಷ್ಟು ;

(ಆ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಕಳೆದ ಮೂರು ವರ್ಷಗಳಿಂದ ನೆಟ್ಟ ಸಸಿಗಳ ಸಂಖ್ಯೆ ಎಷ್ಟು ;

(ಇ) ಸಸಿ ನೆಡುವ ಯೋಜನೆಯಲ್ಲಿ ಕಳಪೆ ಕಾಮಗಾರಿ ನಡೆದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಹಾಗಾದಲ್ಲಿ ಈ ಸಂಬಂಧ ತೆಗೆದುಕೊಂಡ ಕ್ರಮಗಳೇನು ;

(ಉ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಕರ್ನಾಟಕ ವೃಕ್ಷ ಸಂರಕ್ಷಣಾ ಕಾಯ್ದೆ 1976ರಡಿ ನಾಗರಿಕರಿಗೆ ಸ್ವಂತ ನಿವೇಶನದಲ್ಲಿ ಸ್ವಾಭಾವಿಕವಾಗಿ ಬೆಳೆದ ಮರ ಹಾಗೂ ಕೊಂಬೆ ಕಡಿಯಲು ಅಧಿಕಾರಿಗಳು ತೊಂದರೆ ನೀಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಊ) ಹಾಗಾದಲ್ಲಿ ಇದನ್ನು ತಡೆಗಟ್ಟಲು ತೆಗೆದುಕೊಂಡ ಕ್ರಮಗಳಾವುವು?